# ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

50 YEARS JSS COLLEGE OF ARTS, COMMERCE & SCIENCE OOTY ROAD, MYSORE

0821-2548236 & 2548380 Fax: 0821-2548238 E-mail: jssautonomous@gmail.com


ದಿನಾಂಕ: 26.01.2016

## ಪತ್ರಿಕಾ ಪ್ರಕಟಣೆಗಾಗಿ

### "ಇಂದಿನ ವಿದ್ಯಾರ್ಥಿಗಳೇ ಮುಂದಿನ ನಾಯಕರು"

ಮೈಸೂರು: ನಗರದ ಊಟಿರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ 67ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು. ಕಾರ್ಯಕ್ರಮದ ಧ್ವಜಾರೋಹಣವನ್ನು ಬೆಳಗ್ಗೆ 8.30 ಗಂಟೆಗೆ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ನೆರವೇರಿಸಿದರು. ಮುಖ್ಯ ಅತಿಥಿಗಳಾದ ಪ್ರೊ. ಕೆ. ರಾಮಮೂರ್ತಿರಾವ್‌ರವರ ಸಂವಿಧಾನದ ರಚನೆ, ಲಕ್ಷಣ, ಆಶಯ, ಗುರಿ ಹಾಗೂ ಪ್ರಸ್ತುತ ವಿದ್ಯಮಾನಗಳು, ಅಂದಿನಿಂದ ಇಂದಿನವರೆಗಿನ ಭಾರತದ ಪ್ರಗತಿ ಬಗ್ಗೆ ಮಾತನಾಡಿದರು. ಪ್ರಸ್ತುತ ಸರ್ಕಾರದ ಯೋಜನೆಗಳಾದ ಜನ್-ಧನ್, ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಸ್ಟಾರ್ಟ್ ಅಪ್, ಸ್ವಚ್ಛ ಭಾರತ ಕುರಿತು ಯುವಕರಿಗೆ ಅರಿವು ಮೂಡಿಸಿದರು. ರಾಷ್ಟ್ರೀಯ ಹಬ್ಬಗಳು ಮತ್ತು ದೇಶದ ಐಕ್ಯತೆ ಕುರಿತು ಸಹಿಷ್ಣುತೆ ಬೆಳೆಸುವ ಸಲುವಾಗಿ ವಿವಿಧ ಕವಿವಾಣಿಗಳೊಂದಿಗೆ ಮನದಟ್ಟು ಮಾಡಿದರು. ಪದವಿ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎಂ. ಮಹದೇವಪ್ಪನವರು ಎಲ್ಲರನ್ನೂ ಸ್ವಾಗತಿಸಿದರು. ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾದ ಎಸ್. ಸೋಮಶೇಖರ್‌ರವರು ವಂದಿಸಿದರು. ಕಾರ್ಯಕ್ರಮವನ್ನು ಡಾ. ಎಲ್. ವಿನಯ್‌ಕುಮಾರ್‌ರವರು ನಿರೂಪಿಸಿದರು. ಈ ಕಾರ್ಯಕ್ರಮದಲ್ಲಿ ಬೋಧಕ ಬೋಧಕೇತರ ಸಿಬ್ಬಂದಿಯವರು, ಎನ್.ಸಿ.ಸಿ. ಕೆಡೆಟ್‌ಗಳು, ಎನ್.ಎಸ್.ಎಸ್. ಸ್ವಯಂ ಸೇವಕರು, ವಿದ್ಯಾರ್ಥಿ / ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

(ಎಂ. ಮಹದೇವಪ್ಪ)
ಪ್ರಾಚಾರ್ಯರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
(ಸ್ವಾಯತ್ತ)
ಊಟಿ ರಸ್ತೆ, ಮೈಸೂರು-570 025

ಗೆ

ಸಂಪಾದಕರು

_ _ _ _ _ _ _ _ _ _ _ _ _ _ _

_ _ _ _ _ _ _ _ _ _ _ _ _ _ _